126

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಅ.ಆ/ಯ.ವ/ಆ.ಅ/AS/1020(A)/2014–15.

ಅಪರ ಆಯುಕ್ತರವರ ಕಛೇರಿ
ಯಲಹಂಕ ವಲಯ, ಬೃ.ಬೆಂ.ಮ.ಪಾ.
ಬೆಂಗಳೂರು –92 ದಿನಾಂಕ: 5-8-2014

ಆಡಳಿತಾತ್ಮಕ ಅನುಮೋದನೆ

ವಿಷಯ:– **Improvements to roads, drains and covering slab at Nanjappa Layout 10th cross road in Ward No:10(Doddabommasandra), Vidyaranyapura Sub Division**

ಉಲ್ಲೇಖ:- ಮುಖ್ಯ ಲೆಕ್ಕಾಧಿಕಾರಿರವರ ಕಛೇರಿ ಕಾಮಗಾರಿ ಸಂಕೇತ:010–15–000011

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು 2014–15ನೇ ಸಾಲಿನ ದರಪಟ್ಟಿಯಂತೆ **"ಪಿ2415 Reserve Fund for T & F committee"** ಅನುದಾನದಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ.15.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011–12 ದಿನಾಂಕ:21/07/2013ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಈ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ 150 ಕ್ರ.ಸಂ.1020(A) ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:–

1) ಅಂದಾಜು ಪಟ್ಟಿಯ ಮೊತ್ತ ರೂ.2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2) ರಸ್ತೆ ಇತಿಹಾಸ ಪುಸ್ತಕದಲ್ಲಿ (Road History Book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3) ಕೆಲಸದ ಸ್ಥಳದಿಂದ ಸಾಗಣಿ ದೂರಕ್ಕೆ ಅನುಮೋದನೆ ಪಡೆಯುವುದು.
4) ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5) ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಅಪರ ಆಯುಕ್ತರು
ಯಲಹಂಕ ವಲಯ,
ಬಿ.ಬಿ.ಎಂ.ಪಿ ಬೆಂಗಳೂರು–92.

ಅಪರ ಆಯುಕ್ತರು ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬ್ಯಾಟರಾಯನಪುರ, ಬೆಂಗಳೂರು-92

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ನಿಯಂತ್ರಕರು(ಹಣಕಾಸು) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೆಕ್ಕಾಧಿಕಾರಿಗಳು ಬಿ.ಬಿ.ಎಂ.ಪಿ ರವರಿಗೆ ಮಾಹಿತಿಗಾಗಿ ಕಳುಹಿಸಿದೆ.